**All India Radio: Bangalore**
**National Bulletin In Kannada**
**09.09.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**09.09.2026 1.10 p.m.**

**<><><><>**

**ಮುಖ್ಯಾಂಶಗಳು**

1. **ಪ್ರಧಾನಿ ನರೇಂದ್ರ ಮೋದಿ ಸಾರ್ವಜನಿಕ ಜೀವನದ ೨೫ನೇ ವರ್ಷದ ಸ್ಮರಣಾರ್ಥ ಬಿಜೆಪಿಯಿಂದ 'ಸೇವಾ ಸಂಕಲ್ಪ ಅಭಿಯಾನ'**
2. **ವಾರಣಾಸಿಯಲ್ಲಿ ೯ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆಗೆ ಕೇಂದ್ರ ಸಚಿವೆ ಅನ್ನಪೂರ್ಣಾದೇವಿ ಚಾಲನೆ**
3. **ಕೊಲೊಂಬೋದಲ್ಲಿ ಶ್ರೀಲಂಕಾ ಅಧ್ಯಕ್ಷ ಅನುರಾ ಕುಮಾರ ದಿಸ್ಸಾನಾಯಕೆ ಅವರೊಂದಿಗೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಮಾತುಕತೆ**
4. **ಇಂದಿನಿಂದ ಇದೇ ೧೫ರವರೆಗೆ ನಿಜಾರಿ ಇಸ್ಮೈಲಿಗಳ ೫೦ನೇ ಇಮಾಮ್ ರಾಜಕುಮಾರ ೫ನೇ ರಹೀಮ್ ಅಗಾ ಖಾನ್ ಭಾರತ ಭೇಟಿ**
5. **ಯುಎಸ್ ಓಪನ್ ಗ್ರ್ಯಾಂಡ್‌ಸ್ಲ್ಯಾಮ್ ಟೆನಿಸ್: ಅಮೆರಿಕದ ಜೆಸ್ಸಿಕಾ ಪಿಗುಲಾ ಸೆಮಿಫೈನಲ್ ಪ್ರವೇಶ**

<><><><>

**ಪ್ರಧಾನಿ ನರೇಂದ್ರ ಮೋದಿ ಅವರ ಸಾರ್ವಜನಿಕ ಜೀವನದಲ್ಲಿ ೨೫ನೇ ವರ್ಷ ಪೂರೈಸುತ್ತಿರುವ ಸ್ಮರಣಾರ್ಥ ಭಾರತೀಯ ಜನತಾ ಪಕ್ಷ - ಬಿಜೆಪಿ ಇದೇ ೧೭ ರಿಂದ ೧ ತಿಂಗಳ 'ಸೇವಾ ಸಂಕಲ್ಪ ಅಭಿಯಾನ'ವನ್ನು ಆರಂಭಿಸಲಿದೆ. ಅಂದು ಪ್ರಧಾನಿ ಅವರ ಜನ್ಮದಿನ ಆಗಿರುವುದು ವಿಶೇಷವಾಗಿದೆ. ನವದೆಹಲಿಯಲ್ಲಿಂದು ಈ ಕುರಿತು ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್, ೨೦೦೧ ರಲ್ಲಿ ಗುಜರಾತ್ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಪ್ರಧಾನಿ ನರೇಂದ್ರ ಮೋದಿ ಅವರು, ತಮ್ಮ ಸಾರ್ವಜನಿಕ ಸೇವೆಯಲ್ಲಿ ಬರುವ ಅಕ್ಟೋಬರ್ ೭ ರಂದು ೨೫ ವರ್ಷಗಳನ್ನು ಪೂರೈಸಲಿದ್ದಾರೆ ಎಂದರು. ಈ ಕಾಲಾವಧಿಯಲ್ಲಿ ಪ್ರಧಾನಿ, ಸಾರ್ವಜನಿಕ ಸೇವೆಯಿಂದ ರಾಷ್ಟ್ರೀಯ ಸೇವೆಗೆ ಎಂಬ ಮಂತ್ರದಿಂದ ಮಾರ್ಗದರ್ಶನ ಪಡೆದ ತಮ್ಮ ಪಯಣವನ್ನು**

ದೃಢವಾಗಿ ಮುಂದುವರಿಸಿದ್ದಾರೆ ಎಂದು ತಿಳಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಡಿ ಭಾರತದ ಪ್ರಗತಿ ಕೇವಲ ಅಭಿವೃದ್ಧಿಗೆ ಸೀಮಿತವಾಗಿರದೆ ಭಾರತದ ಸಾಂಸ್ಕೃತಿಕ ಗುರುತು ಮತ್ತು ಪರಂಪರೆಯನ್ನು ಸಹ ಬಲಪಡಿಸಲಾಗಿದೆ ಎಂದು ಹೇಳಿದರು. ಸೇವಾ ಸಂಕಲ್ಪ ಅಭಿಯಾನ ರಕ್ತದಾನ ಶಿಬಿರದೊಂದಿಗೆ ಆರಂಭಗೊಳ್ಳಲಿದ್ದು, ಅಕ್ಟೋಬರ್ ೭ ರಂದು ಪ್ರಧಾನಿಯವರಿಗೆ ಕೃತಜ್ಞತೆ ಸಲ್ಲಿಸಲು ಗ್ರಾಮ ಮತ್ತು ನಗರ ಪ್ರದೇಶಗಳನ್ನು ಸಂಪರ್ಕಿಸುವ ಸೇವಾ ಜ್ಯೋತಿ ಕಲಶ ಯಾತ್ರೆಯನ್ನು ಸಹ ನಡೆಸಲಾಗುವುದು ಎಂದು ಮಾಹಿತಿ ನೀಡಿದರು.

<><><><>

ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ವತಿಯಿಂದ ೮ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆ-೨೦೨೫ಕ್ಕೆ ಇಂದು ಉತ್ತರಪ್ರದೇಶದ ವಾರಾಣಸಿಯಲ್ಲಿ ಅಧಿಕೃತವಾಗಿ ಚಾಲನೆ ದೊರೆತಿದೆ. ವಾರಾಣಸಿ ರುದ್ರಾಕ್ಷ ಅಂತಾರಾಷ್ಟ್ರೀಯ ಸಹಕಾರ ಮತ್ತು ಸಮುದಾಯ ಭವನದಲ್ಲಿ ಇಂದು ನಡೆದ ಕಾರ್ಯಕ್ರಮದಲ್ಲಿ. ಈ ಅಭಿಯಾನವನ್ನು ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಅನ್ನಪೂರ್ಣಾದೇವಿ ಹಾಗೂ ಉತ್ತರಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಉದ್ಘಾಟಿಸಿದ್ದಾರೆ. ಅಪೌಷ್ಠಿಕತೆ ಮುಕ್ತ ಭಾರತ ನಿರ್ಮಾಣದ ದೃಷ್ಟಿಯಿಂದ ಜನರಲ್ಲಿ ಜಾಗೃತಿ ಮೂಡಿಸಲು ರೂಪಿಸಲಾದ ಈ ಅಭಿಯಾನವನ್ನು ಈ ಬಾರಿ 'ನಮ್ಮ ಅಂಗನವಾಡಿ, ನಮ್ಮ ಜವಾಬ್ದಾರಿ' ಎಂಬ ಘೋಷವಾಕ್ಯದೊಂದಿಗೆ ಕಾರ್ಯಗತಗೊಳಿಸಲಾಗುತ್ತಿದೆ. ಸೆಪ್ಟಂಬರ್ ತಿಂಗಳ ಪೂರ್ತಿ ನಡೆಯಲಿರುವ ಈ ಬೃಹತ್ ಜಾಗೃತಿ ಅಭಿಯಾನ, ಸಾರ್ವಜನಿಕರು ಹಾಗೂ ಸಮುದಾಯಗಳ ಸಕ್ರಿಯ ಭಾಗವಹಿಸುವಿಕೆಯೊಂದಿಗೆ ದೇಶಾದ್ಯಂತ ಇರುವ ಅಂಗನವಾಡಿ ಕೇಂದ್ರಗಳು, ಶಾಲೆಗಳು, ಪಂಚಾಯತಿಗಳು ಮತ್ತು ಮನೆಮನೆಗಳನ್ನು ತಲುಪಲಿದೆ.

<><><><>

ಶ್ರೀಲಂಕಾ ಪ್ರವಾಸದಲ್ಲಿರುವ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಕೊಲಂಬೋದಲ್ಲಿಂದು ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸ್ಸಾ ನಾಯಕೆ ಅವರೊಂದಿಗೆ ಸಭೆ ನಡೆಸಿದರು. ಸಭೆಯಲ್ಲಿ ನಾಯಕರು, ನಿಕಟ ನಾಗರಿಕತೆಯ ಸಂಬಂಧ ಹೊಂದಿರುವ ಭಾರತ ಮತ್ತು ಶ್ರೀಲಂಕಾ, ನೆರೆಹೊರೆ ರಾಷ್ಟ್ರಗಳು ಹಾಗೂ ಕಡಲ ಪಾಲುದಾರರಾಗಿ ಉಭಯ ದೇಶಗಳ ಅಭಿವೃದ್ಧಿ ಮತ್ತು ಜನರ ಕಲ್ಯಾಣಕ್ಕಾಗಿ ಒಟ್ಟಾಗಿ ಕೆಲಸ ಮಾಡಲು ಮುಂದುವರಿಸುವ ಬದ್ಧತೆಯನ್ನು ಪುನರುಚ್ಚರಿಸಿದರು. ಸಾಮಾಜಿಕ ಮಾಧ್ಯಮದ ಸಂದೇಶದಲ್ಲಿ ಸಚಿವ ರಾಜನಾಥ್ ಸಿಂಗ್, ಈ ಪ್ರದೇಶದಲ್ಲಿ ಸುರಕ್ಷತೆ, ಭದ್ರತೆ, ಶಾಂತಿ ಮತ್ತು

ಸಮೃದ್ಧಿಯನ್ನು ಖಚಿತಪಡಿಸಲು ಜಂಟಿ ಕ್ರಮಕೈಗೊಳ್ಳುವ ಬದ್ಧತೆಯನ್ನು ಪುನರುಚ್ಚರಿಸಿರುವುದಾಗಿ ತಿಳಿಸಿದ್ದಾರೆ.

<><><><>

ಉಪರಾಷ್ಟ್ರಪತಿ ಸಿ.ಪಿ.ರಾಧಕೃಷ್ಣನ್ ಅವರ ಆಹ್ವಾನದ ಮೇರೆಗೆ ನಿಜಾರಿ ಇಸ್ಮೈಲಿಗಳ ೫೦ನೇ ಇಮಾಮ್ ರಾಜಕುಮಾರ ೫ನೇ ರಹೀಮ್ ಅಗಾ ಖಾನ್ ಇಂದಿನಿಂದ ಇದೇ ೧೫ರವರೆಗೆ ಭಾರತಕ್ಕೆ ಭೇಟಿ ನೀಡಲಿದ್ದಾರೆ.  ನಾಳೆ ಅವರು ಉಪರಾಷ್ಟ್ರಪತಿ ಅವರೊಂದಿಗೆ ಮಾತುಕತೆ ನಡೆಸಲಿದ್ದಾರೆ. ನವದೆಹಲಿಯಲ್ಲಿ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭೇಟಿ ಮಾಡುವ ಕಾರ್ಯಕ್ರಮವಿದೆ. ಭಾರತ ಭೇಟಿಯ ಭಾಗವಾಗಿ ಅವರು, ಅಗಾ ಖಾನ್ ಅಭಿವೃದ್ಧಿ ಜಾಲ ವಿವಿಧ ಕಲ್ಯಾಣ ಹಾಗೂ ಸಮುದಾಯ ಉಪಕ್ರಮಗಳಲ್ಲಿ ತೊಡಗಿಸಿಕೊಂಡಿರುವ ನಗರಗಳಾದ ಅಹಮದಾಬಾದ್, ಮುಂಬೈ ಮತ್ತು ಹೈದರಾಬಾದ್‌ಗೆ ಭೇಟಿ ನೀಡಲಿದ್ದಾರೆ. ಇಸ್ಮೈಲಿ ಸುಮುದಾಯದ ೫೦ನೇ ಇಮಾಮ್ ಆಗಿ ಅಧಿಕಾರ ವಹಿಸಿಕೊಂಡ ನಂತರ ರಾಜಕುಮಾರ ೫ನೇ ರಹೀಮ್ ಅಗಾ ಖಾನ್ ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ.

<><><><>

ನ್ಯಾಯಮೂರ್ತಿ ಮಹೇಶ್ ಚಂದ್ರ ತ್ರಿಪಾಠಿ ಅವರು ಇಂದು ಬಾಂಬೆ ಹೈಕೋರ್ಟ್‌ನ ನೂತನ ಮುಖ್ಯ ನ್ಯಾಯಮೂರ್ತಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದಾರೆ. ಮಹಾರಾಷ್ಟ್ರದ ರಾಜ್ಯಪಾಲ ಜಿಷ್ಣು ದೇವ್ ವರ್ಮಾ ಪ್ರಮಾಣ ವಚನ ಬೋಧಿಸಿದರು. ಸುಪ್ರೀಂ ಕೋರ್ಟ್ ಕೊಲಿಜಿಯಂ ಶಿಫಾರಸಿನ ಮೇರೆಗೆ ನ್ಯಾಯಮೂರ್ತಿ ತ್ರಿಪಾಠಿ ಅವರ ನೇಮಕಾತಿಗೆ ರಾಷ್ಟ್ರಪತಿ ಅವರು ಶನಿವಾರ ಅನುಮೋದನೆ ನೀಡಿದ್ದರು. ಅವರು ಬಾಂಬೆ ಹೈಕೋರ್ಟ್‌ನ ೫೦ನೇ ಮುಖ್ಯ ನ್ಯಾಯಮೂರ್ತಿಯಾಗಿದ್ದಾರೆ. ನೇಮಕಾತಿಗೂ ಮುನ್ನ ಅವರು ಅಲಹಾಬಾದ್ ಹೈಕೋರ್ಟ್‌ನಲ್ಲಿ ನ್ಯಾಯಮೂರ್ತಿಯಾಗಿ ಕಾರ್ಯನಿರ್ವಹಿಸುತ್ತಿದ್ದರು.

<><><><>

ಪರಮ್ ವೀರ್ ಚಕ್ರ ಪ್ರಶಸ್ತಿ ಪುರಸ್ಕೃತ ಕ್ಯಾಪ್ಟನ್ ವಿಕ್ರಮ್ ಬಾತ್ರಾ ಅವರ ಜನ್ಮ ದಿನಾಚರಣೆಯಾದ ಇಂದು ಅವರಿಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಗೌರವನಮನ ಸಲ್ಲಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಸಚಿವರು, ಕಾರ್ಗಿಲ್ ಯುದ್ಧದಲ್ಲಿ ಕ್ಯಾಪ್ಟನ್ ವಿಕ್ರಮ್ ಬಾತ್ರಾ,

ಕಾರ್ಯತಂತ್ರದ ದೃಷ್ಟಿಯಲ್ಲಿ ಪ್ರಮುಖವಾದ ಶಿಖರಗಳನ್ನು ವಶಪಡಿಸಿಕೊಂಡರಲ್ಲದೆ, ತಮ್ಮ ಅಪ್ರತಿಮ ನಾಯಕತ್ವ ಮತ್ತು ಶೌರ್ಯದ ಮೂಲಕ ಸಹ ಸೇನಾ ಪಡೆಯ ಮನೋಸ್ಥೈರ್ಯವನ್ನು ಬಲಪಡಿಸಿದರು ಎಂದು ಸ್ಮರಿಸಿದ್ದಾರೆ. ತಮ್ಮ ೨೪ನೇ ವಯಸ್ಸಿನಲ್ಲಿ ದೇಶಕ್ಕಾಗಿ ಪ್ರಾಣವನ್ನೇ ಸಮರ್ಪಿಸಿದ ಕ್ಯಾಪ್ಟನ್ ವಿಕ್ರಮ್ ಬಾತ್ರಾ ಅವರ ಜೀವನ ರಾಷ್ಟ್ರ ಕಲ್ಯಾಣವನ್ನು ಎಲ್ಲಕ್ಕಿಂತ ಮೊದಲ ಆದ್ಯತೆಯಾಗಿ ಇರಿಸಲು ನಮ್ಮೆಲ್ಲರಿಗೂ ಸ್ಫೂರ್ತಿ ನೀಡುತ್ತಲೇ ಇರುತ್ತದೆ ಎಂದು ಸಚಿವರು ತಿಳಿಸಿದ್ದಾರೆ.

<><><>

ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ಕೃಷ್ಣ ಸ್ವಾಮಿನಾಥನ್, ಇಂದಿನಿಂದ ಆಸ್ಟ್ರೇಲಿಯಾ ಮತ್ತು ನ್ಯೂಜಿಲೆಂಡ್‌ಗೆ ಅಧಿಕೃತ ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರವಾಸದ ವೇಳೆ ಅಡ್ಮಿರಲ್ ಸ್ವಾಮಿನಾಥನ್, ರಾಯಲ್ ಆಸ್ಟ್ರೇಲಿಯ ನೌಕಾಪಡೆಯ ಹಿರಿಯ ಅಧಿಕಾರಿಗಳೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಆಸ್ಟ್ರೇಲಿಯಾದ ಹಿರಿಯ ರಕ್ಷಣಾ ಅಧಿಕಾರಿಗಳೊಂದಿಗೂ ಚರ್ಚೆ ನಡೆಸಲಿದ್ದಾರೆ. ಅವರು ಪ್ರಮುಖ ಕಾರ್ಯಾಚರಣೆ ಮತ್ತು ತರಬೇತಿ ಕೇಂದ್ರಗಳಿಗೆ ಭೇಟಿ ನೀಡಲಿದ್ದು, ರಾಯಲ್ ನ್ಯೂಜಿಲೆಂಡ್ ನೌಕಾಪಡೆಯ ಸಿಬ್ಬಂದಿ ಹಾಗೂ ವೃತ್ತಿಪರ ಸೇನಾ ಶಿಕ್ಷಣ ಪಡೆಯುತ್ತಿರುವ ಅಧಿಕಾರಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

<><><>

ಜವಾಹರ್ ನವೋದಯ ವಿದ್ಯಾಲಯಗಳಿಗೆ ೨೦೨೫-೨೬ನೇ ಸಾಲಿನ ೨೭ನೇ ರಾಷ್ಟ್ರೀಯ ಯುವ ಸಂಸತ್ ಸ್ಪರ್ಧೆಯ ಬಹುಮಾನ ವಿತರಣಾ ಕಾರ್ಯಕ್ರಮವು ನಾಳೆ ನವದೆಹಲಿಯ ಸಂಸತ್ ಭವನ ಸಂಕೀರ್ಣದಲ್ಲಿ ನಡೆಯಲಿದೆ. ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು ಅವರು ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದು, ಸ್ಪರ್ಧೆಯಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ವಿದ್ಯಾರ್ಥಿಗಳು ಮತ್ತು ವಿದ್ಯಾಲಯಗಳಿಗೆ ಬಹುಮಾನಗಳನ್ನು ವಿತರಿಸಲಿದ್ದಾರೆ. ಸಂಸದೀಯ ವ್ಯವಹಾರಗಳ ಸಚಿವಾಲಯವು ಕಳೆದ ೩೦ ವರ್ಷಗಳಿಂದ ಜವಾಹರ್ ನವೋದಯ ವಿದ್ಯಾಲಯಗಳಲ್ಲಿ ಯುವ ಸಂಸತ್ ಸ್ಪರ್ಧೆಗಳನ್ನು ಆಯೋಜಿಸುತ್ತಿದೆ. ಜವಾಹರ್ ನವೋದಯ ವಿದ್ಯಾಲಯಗಳಿಗಾಗಿ ರಾಷ್ಟ್ರೀಯ ಯುವ ಸಂಸತ್ ಸ್ಪರ್ಧೆಯ ಯೋಜನೆಯಡಿಯಲ್ಲಿ, ಸರಣಿಯ ೨೭ನೇ ಸ್ಪರ್ಧೆಯನ್ನು ೨೦೨೫-೨೬ರಲ್ಲಿ ಭಾರತದಾದ್ಯಂತ ೧೦೦ ವಿದ್ಯಾಲಯಗಳಲ್ಲಿ ಮತ್ತು ನವೋದಯ ವಿದ್ಯಾಲಯ ಸಮಿತಿಯ ೮ ಪ್ರದೇಶಗಳಲ್ಲಿ ಆಯೋಜಿಸಲಾಗಿತ್ತು.

<><><>

ಸೌದಿ ಅರೇಬಿಯಾದ ಪ್ರದೇಶದಲ್ಲಿ ನಾಗರಿಕ ಮತ್ತು ಆರ್ಥಿಕ ಸೌಲಭ್ಯಗಳನ್ನು ಗುರಿಯಾಗಿಸಿ ನಡೆದಿದೆ ಎಂದು ವರದಿಯಾಗಿರುವ ಹೌತಿ ಸಂಘಟನೆಯ ದಾಳಿಗಳನ್ನು ಭಾರತ ಖಂಡಿಸಿದೆ. ಸೌದಿ ಅರೇಬಿಯಾ ಮೇಲಿನ ದಾಳಿಗಳ ಕುರಿತು ಸುದ್ದಿಗಾರರ ಪ್ರಶ್ನೆಗೆ ಉತ್ತರಿಸಿರುವ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ವಕ್ತಾರ ರಣದೀರ್ ಜೈಸ್ವಾಲ್, ಪ್ರಾದೇಶಿಕ ಭದ್ರತೆ ಮತ್ತು ಸ್ಥಿರತೆಗೆ ಧಕ್ಕೆಯನ್ನುಂಟುಮಾಡುವ ಮತ್ತು ಬಾಬ್-ಎಲ್-ಮಾಂದೆಬ್‌ನಲ್ಲಿ ಸಂಚಾರ ಸ್ವಾತಂತ್ರ್ಯಕ್ಕೆ ಬೆದರಿಕೆ ಒಡ್ಡುವ ದಾಳಿಗಳು ಸ್ವೀಕಾರಾರ್ಹವಲ್ಲ ಎಂದು ಅವರು ಹೇಳಿದ್ದಾರೆ.

<><><>

ನ್ಯೂಯಾರ್ಕ್‌ನಲ್ಲಿ ನಡೆಯುತ್ತಿರುವ ಯುಎಸ್ ಓಪನ್ ಗ್ರ್ಯಾಂಡ್‌ಸ್ಲ್ಯಾಮ್ ಟೆನಿಸ್ ಟೂರ್ನಿಯ ಮಹಿಳಾ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿಂದು ಜೆಸ್ಸಿಕಾ ಪೆಗುಲಾ, ಅಮೆರಿಕದವರೇ ಆದ ಎಮಾ ನವಾರೊ ವಿರುದ್ಧ ಗೆದ್ದು ಸೆಮಿಫೈನಲ್ ಪ್ರವೇಶಿಸಿದ್ದಾರೆ. ಇಂದು ನಡೆದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಪೆಗುಲಾ, ಎಮಾ ನವಾರೊ ವಿರುದ್ಧ ೩-೬, ೬-೪, ೬-೩ ಅಂತರದಲ್ಲಿ ಗೆಲುವು ದಾಖಲಿಸಿ, ಸೆಮಿಫೈನಲ್ಸ್‌ಗೆ ಮುನ್ನಡೆದರು. ಇಂದು ನಡೆಯಲಿರುವ ಇನ್ನೆರಡು ಮಹಿಳಾ ಸಿಂಗಲ್ಸ್‌ನ ಕ್ವಾರ್ಟರ್ ಫೈನಲ್ ಪಂದ್ಯಗಳಲ್ಲಿ ರಷ್ಯಾದ ಮಿರಾ ಆಂಡ್ರಿವಾ ಮತ್ತು ಅಮೆರಿಕದ ಕೊಕೊ ಗೌಫ್ ಹಾಗೂ ಚೀನಾದ ಕ್ವಿನ್‌ವೆನ್ ಜೆನ್ ಮತ್ತು ಕಜಕಿಸ್ತಾನದ ಎಲೆನಾ ರೈಬಾಕಿನಾ ಕಣದಲ್ಲಿದ್ದಾರೆ.

<><><>

ಇಸ್ರೇಲ್ ಸರಕುಗಳ ಮೇಲೆ ಯುಕೆ ವಿಧಿಸಿರುವ ವ್ಯಾಪಕ ನಿರ್ಬಂಧಗಳಿಗೆ ಪ್ರತಿಯಾಗಿ ಇಸ್ರೇಲ್ ಪೂರ್ವ ಜರುಸಲೇಮ್‌ನಲ್ಲಿರುವ ಬ್ರಿಟೀಷ್ ಕಾನ್ಸುಲೇಟ್ ಅನ್ನು ಮುಚ್ಚಲು ಆದೇಶಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>